ಧಾರವಾಡದ ಕಾಯಕನಗರ ಯೋಜನೆ

219 (578) ಶ್ರೀ ಬೆಲ್ಲದ್ ಚಂದ್ರಕಾಂತ್ ಗುರಪ್ಪ (ಧಾರವಾಡ) ಮಾನ್ಯ ಕಾರ್ಮಿಕ, ಸಣ್ಣ ಪ್ರಮಾಣದ ಕೈಗಾರಿಕಾ ಮತ್ತು ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಧಾರವಾಡದ ಕಾಯಕನಗರ ಯೋಜನೆ ಯಾವಾಗ ರೂಪುಗೊಂಡಿತು

ಆ) ಯಾರಿಗಾಗಿ ಈ ಯೋಜನೆಯನ್ನು ರೂಪಿಸಲಾಗಿದೆ? ಯೋಜನೆಗಾಗಿ ಸರ್ಕಾರ ಬಿಡುಗಡೆ ಮಾಡಿದ ಹಣವೆಷ್ಟು

ಇ) ಯೋಜನೆಯು ಹಾಲಿ ಯಾವ ಹಂತದಲ್ಲಿದೆ

ಈ) ಈವರೆಗಿನ ಹಣದ ಹೂಡಿಕೆಯಿಂದ ಎಷ್ಟು ಜನರಿಗೆ ಕಾಯಕದ ಅವಕಾಶ ಕಲ್ಪಿಸಲಾಗಿದೆ?

ಶ್ರೀ ಖಮರುಲ್ ಇಸ್ಲಾಂ (ಕಾರ್ಮಿಕ, ಸಣ್ಣ ಪ್ರಮಾಣದ ಕೈಗಾರಿಕಾ ಮತ್ತು ಹಜ್ ಸಚಿವರು)

ಅ) ಸರ್ಕಾರದ ಆದೇಶ ಸಂಖ್ಯೆ.56:ಸಪ್ರ ಕೈ 39 ದಿನಾಂಕ 30 03 2000 ರಂದು ಹೊರಡಿಸಿದ ಅನ್ವಯ ಧಾರವಾಡ ಜಿಲ್ಲೆಯ ನರೇಂದ್ರ ಗ್ರಾಮದಲ್ಲಿ ಕಾಯಕನಗರ ಯೋಜನೆ ರೂಪುಗೊಂಡಿರುತ್ತದೆ

ಆ) ವೃತ್ತಿ ನಿರತ ಹಾಗೂ ನಿವೇಶನ ರಹಿತ ಕುಶಲಕರ್ಮಿಗಳಿಗೆ ವಸತಿ ಸೌಕರ್ಯ ಹಾಗೂ ಸಾಮೂಹಿಕ ಕಾರ್ಯಗಾರವನ್ನು ಕಲ್ಪಿಸಲು ಕಾಯಕನಗರ ಯೋಜನೆಯನ್ನು ರೂಪಿಸಲಾಗಿದೆ

ಸರ್ಕಾರದಿಂದ ಇಲ್ಲಿಯವರೆಗೆ ರೂ 65 00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ

ಇ) ಒಟ್ಟು 35 24 ಎಕರೆ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲು ರೂ 8 00 ಲಕ್ಷಗಳನ್ನು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಗೆ ನೀಡಬೇಕಾಗಿರುತ್ತದೆ ಇದರಲ್ಲಿ ರೂ 65 00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು ಉಳಿದ ರೂ 43 00 ಲಕ್ಷಗಳನ್ನು ಬಿಡುಗಡೆ ಮಾಡಿದ ನಂತರ ಭೂಮಿಯನ್ನು ಸ್ವಾಧೀನಪಡಿಸಿಕೊಂಡು ಅಭಿವೃದ್ಧಿ ಕಾರ್ಯವನ್ನು ಪ್ರಾರಂಭಿಸಲಾಗುವುದು

ಈ) ಒಟ್ಟು 678 ಫಲಾನುಭವಿಗಳನ್ನು ಗುರುತಿಸಿದ್ದು ಭೂ ಅಭಿವೃದ್ಧಿಪಡಿಸಿದ ಮೇಲೆ ಫಲಾನುಭವಿಗಳಿಗೆ ನಿವೇಶನಗಳನ್ನು ವಿತರಿಸಲು ಕ್ರಮ ಕೈಗೊಳ್ಳಲಾಗುವುದು

ಬಿಜಾಪುರ ಜಿಲ್ಲೆಯಲ್ಲಿ ಪಶುವೈದ್ಯ ಆಸ್ಪತ್ರೆಗಳ ಮಂಜೂರಾತಿ

220 (241) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಿಜಾಪುರ ಜಿಲ್ಲೆಯಲ್ಲಿರುವ ಪಶುವೈದ್ಯ ಆಸ್ಪತ್ರೆಗಳ ಸಂಖ್ಯೆ ಎಷ್ಟು

ಆ) ಹೆಚ್ಚುವರಿಯಾಗಿ ಮಂಜೂರು ಮಾಡಲು ಉದ್ದೇಶಿಸಿರುವ ಸ್ಥಳಗಳಾವುವು

ಇ) ಬಸವನಬಾಗೇವಾಡಿ ಕ್ಷೇತ್ರದ ಕಾರಜೋಳ ರೇಣಹಾಳ, ಮಸಿಬನಾಳ ಈ ಸ್ಥಳಗಳಿಗೆ ಮಂಜೂರು ಮಾಡುವ ಪ್ರಸ್ತಾಪ ಸರ್ಕಾರಕ್ಕಿದೆಯೇ

ಈ) ಇದ್ದಲ್ಲಿ ಯಾವಾಗ ಕೈಗೆತ್ತಿಕೊಳ್ಳಲಾಗುತ್ತದೆ ಈ ಬಗ್ಗೆ ಸರ್ಕಾರ ಕೈಗೊಂಡಿರುವ ಪ್ರಗತಿ ಕಾರ್ಯಗಳೇನು?

ಶ್ರೀ ಎಂ ಮಹಾದೇವ್ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು)

ಅ) ಬಿಜಾಪುರ ಜಿಲ್ಲೆಯಲ್ಲಿ 7 ಪಶುವೈದ್ಯ ಆಸ್ಪತ್ರೆಗಳಿವೆ

ಆ) ಯಾವುದೇ ಹೊಸ ಪಶುವೈದ್ಯ ಸಂಸ್ಥೆಯನ್ನು ಮಂಜೂರು ಮಾಡುವ ಕಾರ್ಯಕ್ರಮ ಇರುವುದಿಲ್ಲ

ಇ) ಮತ್ತು ಈ) ಮೇಲಿನ 'ಅ' ಕ್ಕೆ ನೀಡಿದ ಉತ್ತರದ ಹಿನ್ನೆಲೆಯಲ್ಲಿ ಉದ್ಭವಿಸುವುದಿಲ್ಲ

ವಿದ್ಯಾರ್ಥಿನಿಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮೇಲ್ವಿಚಾರಕರು

221 (129) ಶ್ರೀ ಚಲುವನಾರಾಯಣ ಸ್ವಾಮಿ ಎನ್ (ನಾಗಮಂಗಲ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮೇಲ್ವಿಚಾರಕರನ್ನು ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದು ಸದರಿ ನೌಕರರನ್ನು ಮಾತೃ ಇಲಾಖೆಗೆ ವಾಪಸ್ಸು ಕಳುಹಿಸಲಾಗುವುದೇ ಇಲ್ಲದಿದ್ದರೆ, ವಿವರ ನೀಡುವುದು

ಆ) ನಾಗಮಂಗಲ ತಾಲ್ಲೂಕು ಬೆಳ್ಳೂರು ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಮೇಲ್ವಿಚಾರಕರಕರು ಶಿಕ್ಷಣ ಇಲಾಖೆಯಿಂದ ನಿಯೋಜನೆ ಮೇಲೆ ಬಂದಿದ್ದು, ಇವರ ಮೇಲೆ ಸಾರ್ವಜನಿಕವಾಗಿ ದೂರು ಇದ್ದು, ಅಮಾನತ್ತುಗೊಂಡಿರುತ್ತಾರೆ ಆದರೂ ಇವರನ್ನು ಪುನ ಇದೇ ಹುದ್ದೆಗೆ ವರ್ಗಾಯಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಬಂದಿದ್ದರೆ ರದ್ದುಪಡಿಸಲು ಕ್ರಮವೇನು?

ಶ್ರೀ ಎ ಕೃಷ್ಣಪ್ಪ, (ಸಮಾಜ ಕಲ್ಯಾಣ ಸಚಿವರು)

ಅ) ಶಿಕ್ಷಣ ಇಲಾಖೆಯಿಂದ ಹಲವು ಸಹ ಶಿಕ್ಷಕರು ನಿಯೋಜನೆಯ ಮೇಲೆ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಇಲಾಖೆಯ ಹಲವು ವಿದ್ಯಾರ್ಥಿನಿಲಯಗಳಲ್ಲಿ ನಿಲಯ ಮೇಲ್ವಿಚಾರಕರಾಗಿ ಕೆಲಸ ನಿರ್ವಹಿಸುತ್ತಿದ್ದಾರೆ ಖಾಲಿ ಇರುವ ನಿಲಯ ಮೇಲ್ವಿಚಾರಕರ ಹುದ್ದೆಗಳನ್ನು ಭರ್ತಿ ಮಾಡಿದ ನಂತರ ಅಥವಾ ಶೈಕ್ಷಣಿಕ ವರ್ಷ ಮುಗಿದ ನಂತರ ಈ ನೌಕರರನ್ನು ಅವರ ಮಾತೃ ಇಲಾಖೆಗೆ ಹಿಂದಿರುಗಿಸಲಾಗುವುದು ನಿಯೋಜನೆ ಮೇಲೆ ಸೇವೆ ಸಲ್ಲಿಸುತ್ತಿರುವ ನೌಕರರ ವಿವರಗಳನ್ನು ಅನುಬಂದ – 1 ಮತ್ತು 2 ರಲ್ಲಿ ಒದಗಿಸಲಾಗಿದೆ

ಆ) ಸಮಾಜ ಕಲ್ಯಾಣ ಇಲಾಖೆ

ಅನ್ವಯಿಸುವುದಿಲ್ಲ

ಹಿಂದುಳಿದ ವರ್ಗಗಳ ಇಲಾಖೆ

ಹೌದು, ಸರ್ಕಾರದ ಗಮನಕ್ಕೆ ಬಂದಿರುತ್ತದೆ ಶ್ರೀ ಜಯರಾಮೇಗೌಡ, ಸಹಶಿಕ್ಷಕರು, ನಿಯೋಜನೆ ಮೇಲೆ ಬೆಳ್ಳೂರು ಮಟ್ರಿಕ್–ಪೂರ್ವ ಬಾಲಕರ ವಸತಿ ನಿಲಯದಲ್ಲಿ ನಿಯೋಜನೆಯ ಮೇಲೆ ಕೆಲಸ ನಿರ್ವಹಿಸುತ್ತಿದ್ದು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾಪಂಚಾಯತ್ ಮಂಡ್ಯ ಇವರು ದಿನಾಂಕ 23–9–2003ರ ಆದೇಶದಲ್ಲಿ ಈ ನೌಕರನನ್ನು ಅಮಾನತ್ತಿನಲ್ಲಿ ಇಟ್ಟಿರುತ್ತಾರೆ ಅನಂತರ ಅಮಾನತ್ತಿನ ಆದೇಶವನ್ನು ಹಿಂತೆಗೆದು ಸ್ಥಳ ಬದಲಾವಣೆ ಮಾಡಿ ಈ ನೌಕರನನ್ನು ಮೆಟ್ರಿಕ್– ಪೂರ್ವ ಬಾಲಕರ ವಸತಿನಿಲಯ, ಚೀಣ್ಯ, ನಾಗಮಂಗಲ ತಾಲ್ಲೂಕು ಇಲ್ಲಿಗೆ ನಿಯೋಜಿಸಿರುತ್ತಾರೆ

ಪ್ರಸಕ್ತ ಸಾಲಿನ ಶೈಕ್ಷಣಿಕ ವರ್ಷ ಮುಕ್ತಾಯವಾದ ನಂತರ ಈ ನೌಕರನನ್ನು ಮಾತೃ ಇಲಾಖೆಯಾದ ಶಿಕ್ಷಣ ಇಲಾಖೆಗೆ ವಾಪಸ್ಸು ಕಳುಹಿಸಲಾಗುತ್ತದೆ